## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 145 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| 3) | ಉತ್ತರಿಸಬೇಕಾದ ದಿನಾಂಕ | 13-12-2021 |
| 4) | ಉತ್ತರಿಸುವವರು | ಮಾನ್ಯ ಉನ್ನತ ಶಿಕ್ಷಣ, ಐಟಿ/ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃಧ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು. |

| ಪ್ರಶ್ನೆ | ಉತ್ತರ |
|---|---|
| (ಅ) ಹಿಂದೆ ವಯಸ್ಕರ ಶಿಕ್ಷಣ ಸಮಿತಿಯಲ್ಲಿ ಸೇವೆ ಸಲ್ಲಿಸುತ್ತಿದ್ದ ನೌಕರರನ್ನು ಮತ್ತು ಅದರ ಆಸ್ತಿಗಳನ್ನು ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಇಲಾಖೆಗೆ ಯಾವಾಗ ವರ್ಗಾಯಿಸಲಾಗಿದೆ: ಈ ನೌಕರರು ಯಾವ ಯಾವ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ; | ಕೌಶಲ್ಯಾಬಿವೃದ್ಧಿ, ಉದ್ಯಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿ ಬರುವ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮಕ್ಕೆ ಸರ್ಕಾರಿ ಆದೇಶ ಸಂಖ್ಯೆ: ಕೌಉಜೀಇ 145 ಉಜೀಇ 2017 ದಿನಾಂಕ:06.12.2017 ಹಾಗೂ ಸರ್ಕಾರಿ ಆದೇಶ ಸಂಖ್ಯೆ: ಇಡಿ 103 ಪಿಟಿಐ 2017 ದಿನಾಂಕ:11.09.2017 ರನ್ವಯ 16 ವಿದ್ಯಾಪೀಠಗಳ ಸ್ಥಿರ ಮತ್ತು ಚರಾಸ್ಥಿಗಳು ಹಾಗೂ ವಿಸರ್ಜಿತ ಕರ್ನಾಟಕ ರಾಜ್ಯ ವಯಸ್ಕರ ಶಿಕ್ಷಣ ಸಮಿತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ, 36 ಸಿಬ್ಬಂದಿಗಳೊಂದಿಗೆ ವರ್ಗಾಯಿಸಲಾಗಿದೆ. ಈ ರೀತಿ ವರ್ಗಾಯಿಸಿರುವ ನೌಕರರು ನಿಗಮದ ಕೇಂದ್ರ ಕಛೇರಿ ಹಾಗೂ ವಿವಿಧ ಜಿಲ್ಲೆಗಳ ವಿದ್ಯಾಪೀಠಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. |
| (ಆ) ವಯಸ್ಕರ ಶಿಕ್ಷಣ ಸಮಿತಿಯಲ್ಲಿ ಸೇವೆ ಸಲ್ಲಿಸುತ್ತಿದ್ದ ಎಷ್ಟು ನೌಕರರು ಇನ್ನೂ ಸೇವೆಯಲ್ಲಿ ಮುಂದುವರೆದಿದ್ದಾರೆ; ಎಷ್ಟು ಜನ ನಿವೃತ್ತರಾಗಿದ್ದಾರೆ; | ವಯಸ್ಕರ ಶಿಕ್ಷಣ ಸಮಿತಿಯ ಮೂಲಕ ಈ ಇಲಾಖೆಗೆ ಹಸ್ತಾಂತರಿಸಲಾದ 36 ನೌಕರರ ಪೈಕಿ 09 ನೌಕರರು ಪ್ರಸ್ತುತ ಸೇವೆಯಲ್ಲಿ ಮುಂದುವರೆದಿರುತ್ತಾರೆ. 27ನೌಕರರು ನಿವೃತ್ತರಾಗಿರುತ್ತಾರೆ. |
| (ಇ) ಈ ನೌಕರರಲ್ಲಿ ಯಾರಾದರೂ ಅಕ್ರಮವೆಸಗಿ ವಿಚಾರಣೆ ಎದುರಿಸಿದ್ದಾರೆಯೇ; ನ್ಯಾಯಾಲಯಕ್ಕೆ ಹೋಗಿ ಆದೇಶವೇನಾದರೂ ಆಗಿದೆಯೇ; ಎಷ್ಟು ನೌಕರರ ಮೇಲೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ? | ಈ ಇಲಾಖೆಗೆ ವರ್ಗಾಯಿಸಲಾದ 36 ನೌಕರರುಗಳ ವಿರುದ್ಧ ಅಕ್ರಮವೆಸಗಿದ ಮತ್ತು ನ್ಯಾಯಾಲಯದ ಯಾವುದೇ ಪ್ರಕರಣಗಳು ಇರುವುದಿಲ್ಲ. |

**ಸಂಖ್ಯೆ: ಕೌಉಜೀಇ 66 ಉಜೀಪ್ರ 2021**

(ಡಾ॥ ಸಿ.ಎನ್. ಅಶ್ವಥ್‌ನಾರಾಯಣ)
ಉನ್ನತ ಶಿಕ್ಷಣ, ಐಟಿ-ಬಿಟಿ ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಮತ್ತು
ಕೌಶಲ್ಯಾಭಿವೃದ್ದಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು.